## ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ರಾಯಚೂರು.

### ಅಧಿಸೂಚನೆ ಸಂಖ್ಯೆ: 1/2017/ಆಡಳಿತ/ ದಿನಾಂಕ: 22-05-2017

ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಯಚೂರು ಘಟಕದಲ್ಲಿ ಶೀಘ್ರಲಿಪಿಗಾರರು, ಬೆರಳಚ್ಚುಗಾರರು, ಮತ್ತು ಬೆರಳಚ್ಚು ನಕಲುಗಾರರು ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಈ ಅಧಿಸೂಚನೆಯ ಜೊತೆ ಲಗತ್ತಿಸಿರುವ ಅರ್ಜಿ ನಮೂನೆಯಲ್ಲಿ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

**ಅರ್ಜಿಗಳನ್ನು ಸಲ್ಲಿಸಲು ಕಡೆಯ ದಿನಾಂಕ: 22-06-2017**

ಉಲ್ಲೇಖ: 1) ಮಾನ್ಯ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: LCA II 128/2012, Dtd.13-02-2017.

2) ನೂತನವಾಗಿ ರಚಿಸಲಾಗಿರುವ ನ್ಯಾಯಾಲಯಗಳ ಅಧಿಸೂಚನೆ ಸಂಖ್ಯೆ:
G.O.No. LAW 135 LCE 2014, Dated: 11-09-2015,
G.O.No. LAW 137 LCE 2014, Dated:28-03-2016
G.O.No. LAW 112 LCE 2012, Dated: 28-12-2017,

**ಶೀಘ್ರಲಿಪಿಗಾರರು: Stenographers:**

ಖಾಲಿ ಹುದ್ದೆಗಳು : 10

ವೇತನ ಶ್ರೇಣಿ: 14550-350-15600-400-17200-450-19000-500-21000-600-24600-700-26700 ಹಾಗೂ ಇತರೆ ಭತ್ಯೆಗಳು

**ಹೈದರಾಬಾದ್– ಕರ್ನಾಟಕ ಸ್ಥಳೀಯ ವೃಂದ ಹುದ್ದೆಗಳ ವರ್ಗೀಕರಣ**

**(Hyderabad Karnataka Local cadre)**

| ಮೀಸಲಾತಿ ವರ್ಗ | ಇತರೆ | ಮಹಿಳೆ | ಗ್ರಾಮೀಣ | ಅಂ.ಅ | ಒಟ್ಟು |
|---|---|---|---|---|---|
| ಸಾಮಾನ್ಯ | 01 | 02 | 01 | 01 * | 05 |
| ಪರಿಶಿಷ್ಟ ಜಾತಿ | - | 01 | 01 | - | 02 |
| II-A | - | 01 | - | - | 01 |
| II- B | 01 | - | - | - | **01** |
| III –A | 01 | - | - | - | **01** |
| ಒಟ್ಟು | **03** | **04** | **02** | **01** | **10** |

* - 01 ಹುದ್ದೆ ದೃಷ್ಟಿಮಾಂದ್ಯ ಅಭ್ಯರ್ಥಿಗೆ ಮೀಸಲಿಡಲಾಗಿದೆ. ಒಂದು ವೇಳೆ ಗುರುತಿಸಲಾದ ಅಂಗವಿಕಲತೆವುಳ್ಳ ಅಭ್ಯರ್ಥಿಯು ಲಭ್ಯವಾಗದಿದ್ದಲ್ಲಿ ಇತರೇ ಯಾವುದೇ ಅಂಗವಿಕಲತೆವುಳ್ಳ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ಪರಿಗಣಿಸಲಾಗುವುದು.

**ಉಳಿಕೆ ಮೂಲ ವೃಂದ (Residual Parent Cadre) ಹುದ್ದೆ ಸಂಖ್ಯೆ: 03**

| ಮೀಸಲಾತಿ ವರ್ಗ | ಇತರೆ | ಗ್ರಾಮೀಣ | ಒಟ್ಟು |
|---|---|---|---|
| ಸಾಮಾನ್ಯ | 01 | 01 | 02 |
| ಪರಿಶಿಷ್ಟ ಜಾತಿ | 01 | - | 01 |
| ಒಟ್ಟು | **02** | **01** | **03** |

**ಬೆರಳಚ್ಚುಗಾರರು Typist:**

ಖಾಲಿ ಹುದ್ದೆಗಳು: 10

ವೇತನ ಶ್ರೇಣಿ: 11600-200-12000-250-13000-300-14200-350-15600-400-17200-450-19000-500-21000 ಹಾಗೂ ಇತರೆ ಭತ್ಯೆಗಳು

**ಹೈದರಾಬಾದ್– ಕರ್ನಾಟಕ ಸ್ಥಳೀಯ ವೃಂದ ಹುದ್ದೆಗಳ ವರ್ಗೀಕರಣ**

**Hyderabad Karnataka Local Cadre**

| ಮೀಸಲಾತಿ ವರ್ಗ | ಇತರೆ | ಮಹಿಳೆ | ಗ್ರಾಮೀಣ | ಮಾ.ಸೈ | ಅಂ.ಅ | ಒಟ್ಟು |
|---|---|---|---|---|---|---|
| ಸಾಮಾನ್ಯ | - | 02 | 02 | 01 | - | 05 |
| ಪರಿಶಿಷ್ಟ ಜಾತಿ | - | - | - | - | 01 | 01 |
| ಪ್ರವರ್ಗ- II-A | - | - | 01 | - | 01 | 02 |
| ಪ್ರವರ್ಗ- III –A | 01 | - | - | - | - | 01 |
| ಪ್ರವರ್ಗ -III-B | 01 | - | - | - | - | 01 |
| ಒಟ್ಟು | **02** | **02** | **03** | **01** | **02** | **10** |

**ಬೆರಳಚ್ಚು ನಕಲುಗಾರರು Typist-Copyist:**

ಖಾಲಿ ಹುದ್ದೆಗಳು: 09

ವೇತನ ಶ್ರೇಣಿ : 11600-200-12000-250-13000-300-14200-350-15600-400-17200-450-19000-500-21000 ಹಾಗೂ ಇತರೆ ಭತ್ಯೆಗಳು

**ಹೈದರಾಬಾದ್– ಕರ್ನಾಟಕ ಸ್ಥಳೀಯ ವೃಂದ ಹುದ್ದೆಗಳ ವರ್ಗೀಕರಣ**

**Hyderabad Karnataka Local Cadre**

| ಮೀಸಲಾತಿ ವರ್ಗ | ಇತರೆ | ಮಹಿಳೆ | ಗ್ರಾಮೀಣ | ಮಾ.ಸೈ | ಅಂ.ಅ | ಒಟ್ಟು |
|---|---|---|---|---|---|---|
| ಸಾಮಾನ್ಯ | 01 | 01 | 02 | - | 01 * | 05 |
| ಪರಿಶಿಷ್ಟ ಜಾತಿ | - | 01 | 01 | - | - | 02 |
| ಪರಿಶಿಷ್ಟ ಪಂಗಡ | 01 | - | - | - | - | 01 |
| ಪ್ರವರ್ಗ–I | 01 | - | - | - | - | 01 |
| ಒಟ್ಟು | **02** | **02** | **03** | **-** | **01** | **09** |

* - 01 ಹುದ್ದೆ ದೃಷ್ಟಿಮಾಂದ್ಯ ಅಭ್ಯರ್ಥಿಗೆ ಮೀಸಲಿಡಲಾಗಿದೆ. ಒಂದು ವೇಳೆ ಗುರುತಿಸಲಾದ ಅಂಗವಿಕಲತೆವುಳ್ಳ ಅಭ್ಯರ್ಥಿಯು ಲಭ್ಯವಾಗದಿದ್ದಲ್ಲಿ ಇತರೇ ಯಾವುದೇ ಅಂಗವಿಕಲತೆವುಳ್ಳ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ಪರಿಗಣಿಸಲಾಗುವುದು.

**ಶೀಘ್ರಲಿಪಿಗಾರರು,**

**ವಿದ್ಯಾರ್ಹತೆ:**

ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಎರಡೂ ಭಾಷೆಯಲ್ಲೂ ಹಿರಿಯ ಶ್ರೇಣಿ ಬೆರಳಚ್ಚು ಮತ್ತು ಶೀಘ್ರಲಿಪಿ ಹಿರಿಯ ಶ್ರೇಣಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

**ಕಂಪ್ಯೂಟರ ಸಾಕ್ಷರತಾ ಪರೀಕ್ಷೆ :**

ಆಯ್ಕೆಯಾದ ಅಭ್ಯರ್ಥಿಗಳು ಕಂಪ್ಯೂಟರ ಸಾಕ್ಷರತಾ ಪರೀಕ್ಷೆಯನ್ನು ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012 ಹಾಗೂ ತಿದ್ದುಪಡಿ ನಿಯಮಗಳು, 2015ರನ್ವಯ ಪ್ರತಿಶತ 60 ರಂತೆ ಅಂಕಗಳನ್ನು ಪಡೆದು ಪರಿವೀಕ್ಷಣಾ ಅವಧಿಯೊಳಗೆ ಉತ್ತೀರ್ಣರಾಗತಕ್ಕದ್ದು.

**ಆಯ್ಕೆಯ ವಿಧಾನ:**

ಕರ್ನಾಟಕ ಆಧೀನ ನ್ಯಾಯಾಲಗಳು ( ಮಿನಿಸ್ಟ್ರೀಯಲ್ ಮತ್ತು ಇತರೇ ಹುದ್ದೆಗಳು) ನೇಮಕಾತಿ ನಿಯಮಗಳು 1982 ಮತ್ತು (ತಿದ್ದುಪಡಿ) 2007 ರನ್ವಯ ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು.

ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ನಿಮಿಷ ಒಂದಕ್ಕೆ 120 ಪದಗಳ ದರದಲ್ಲಿ 5 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು, ಉಕ್ತಲೇಖನವನ್ನು 45 ನಿಮಿಷಗಳಲ್ಲಿ ಅನುಲಿಪಿ ಮಾಡುವ ಸಾಮಾರ್ಥ್ಯ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ನಿಗಧಿಪಡಿಸಲಾದ ವಿದ್ಯಾರ್ಹತೆಯ ಪರೀಕ್ಷೆಗಳಲ್ಲಿನ ಮತ್ತು ಅರ್ಹತಾ ಪರೀಕ್ಷೆಯ ಒಟ್ಟು ಅಂಕಗಳ ಶೇಕಡವಾರುವಿನ ಮೊತ್ತದ ಆಧಾರದ ಮೇಲೆ 1:5 ಅನುಗುಣವಾಗಿ ಅರ್ಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.

**ಟಿಪ್ಪಣಿ:**

ಸಾಮಾರ್ಥ್ಯ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.

**ಬೆರಳಚ್ಚುಗಾರರು / ಬೆರಳಚ್ಚು ನಕಲುಗಾರರು**

**ವಿದ್ಯಾರ್ಹತೆ: ಬೆರಳಚ್ಚುಗಾರರು**

ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಎರಡೂ ಭಾಷೆಯಲ್ಲೂ ಹಿರಿಯ ಶ್ರೇಣಿ ಬೆರಳಚ್ಚು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

**ವಿದ್ಯಾರ್ಹತೆ: ಬೆರಳಚ್ಚು ನಕಲುಗಾರರು**

ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಎರಡೂ ಭಾಷೆಯಲ್ಲೂ ಕಿರಿಯ ಶ್ರೇಣಿ ಬೆರಳಚ್ಚು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

**ಕಂಪ್ಯೂಟರ ಸಾಕ್ಷರತಾ ಪರೀಕ್ಷೆ :**

ಆಯ್ಕೆಯಾದ ಅಬ್ಯರ್ಥಿಗಳು ಕಂಪ್ಯೂಟರ ಸಾಕ್ಷರತಾ ಪರೀಕ್ಷೆಯನ್ನು ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012 ಹಾಗೂ ತಿದ್ದುಪಡಿ ನಿಯಮಗಳು, 2015ರನ್ವಯ ಪ್ರತಿಶತ 60 ರಂತೆ ಅಂಕಗಳನ್ನು ಪಡೆದು ಪರಿವೀಕ್ಷಣಾ ಅವಧಿಯೊಳಗೆ ಉತ್ತೀರ್ಣರಾಗತಕ್ಕದ್ದು.

**ಆಯ್ಕೆಯ ವಿಧಾನ:**

ಕರ್ನಾಟಕ ಆಧೀನ ನ್ಯಾಯಾಲಗಳು (ಮಿನಿಸ್ಟ್ರೀಯಲ್ ಮತ್ತು ಇತರೇ ಹುದ್ದೆಗಳು) ನೇಮಕಾತಿ ನಿಯಮಗಳು 1982 ಮತ್ತು (ತಿದ್ದುಪಡಿ) 2007 ರನ್ವಯ ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು.

ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಗಗಳು ಮತ್ತು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಬೆರಳಚ್ಚು ಯಂತ್ರ/ ಕಂಪ್ಯೂಟರನಲ್ಲಿ ಬೆರಳಚ್ಚು ಮಾಡುವ ಸಾಮಾರ್ಥ್ಯ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ನಿಗಧಿಪಡಿಸಲಾದ ವಿದ್ಯಾರ್ಹತೆಯ ಪರೀಕ್ಷೆಗಳಲ್ಲಿನ ಮತ್ತು ಅರ್ಹತಾ ಪರೀಕ್ಷೆಯ ಒಟ್ಟು ಅಂಕಗಳ ಶೇಕಡವಾರುವಿನ ಮೊತ್ತದ ಆಧಾರದ ಮೇಲೆ 1:5 ಅನುಗುಣವಾಗಿ ಅರ್ಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.

**ಟಿಪ್ಪಣಿ:**

ಸಾಮಾರ್ಥ್ಯ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.

**ವಯೋಮಿತಿ:**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು:

ಅ: ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

ಆ. ಗರಿಷ್ಟ ವಯೋಮಿತಿ

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| 2ಎ, 2ಬಿ, 3ಎ, 3ಬಿ | 38 ವರ್ಷ |
| ಪ.ಜಾತಿ, ಪ.ಪಂಗಡ, ಪ್ರವರ್ಗ–1 | 40 ವರ್ಷ |

ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು. ಮತ್ತು ಸರಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ, ಹಾಗೂ ಅಂಗವಿಕಲರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

<u>ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಈ ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.</u>

1. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು ಹಾಗೂ ಗ್ರಾಮೀಣ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಅಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಗೂ ಸಹ ಲಭ್ಯವಾಗದಿದ್ದಲ್ಲಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.
2. ಅರ್ಹತಾ ಪರೀಕ್ಷೆಗೆ ಹಾಗೂ ಸಂದರ್ಶನಕ್ಕೆ ಆಯ್ಕೆಯಾಗುವ ಅಭ್ಯರ್ಥಿಗಳು ರಾಯಚೂರು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.
3. ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977 ರಪ್ರಕಾರ 02 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

ಈ ಪ್ರಕಟಣೆಯಲ್ಲಿ ಲಗತ್ತಿಸಿರುವ ಅರ್ಜಿ ನಮೂನೆಯನ್ನು ಬೆರಳಚ್ಚು ಮಾಡಿ/ ಕಂಪ್ಯೂಟರ್ ಮೂಲಕ ತಯಾರಿಸಿ <u>ಅಭ್ಯರ್ಥಿಯು ತಮ್ಮ ಕೈಬರಹದಲ್ಲಿ ತಮಗೆ ಅನ್ವಯಿಸುವ ಎಲ್ಲಾ ಅಂಕಣಗಳನ್ನು ಭರ್ತಿ ಮಾಡುವುದು.</u> ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ ಅಳತೆಯ ಭಾವಚಿತ್ರವನ್ನು ಅರ್ಜಿಯ ಮೇಲೆ ಅಂಟಿಸಿ, ಅದರ ಮೇಲೂ ಸಹ ಸಹಿ ಮಾಡುವುದು ಹಾಗೂ ಅರ್ಜಿ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ ಮಾಡುವುದು. ಹುದ್ದೆಗೆ ಸಂಬಂಧಿಸಿದ ವಿದ್ಯಾರ್ಹತೆ, ವಯಸ್ಸು ಮತ್ತು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಅಧಿಕೃತ ಅಧಿಕಾರಿಗಳಿಂದ ಪಡೆದು, ಅವುಗಳ ನಕಲುಗಳನ್ನು ಸ್ವಯಂ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಅರ್ಜಿಯನ್ನು " ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಯಚೂರು-584101" ಇವರಿಗೆ ದಿನಾಂಕಃ 22-06-2017 ರ ಅಪರಾಹ್ನ 5:00 ಗಂಟೆಯೊಳಗೆ ತಲುಪುವಂತೆ ಕಳುಹಿಸುವುದು. ಅರ್ಜಿಯನ್ನು ಕಳುಹಿಸುವ ಲಕೋಟೆ ಮೇಲೆ ಅಭ್ಯರ್ಥಿಯು ಯಾವ ಹುದ್ದೆಗೆ ಅರ್ಜಿಯನ್ನು ಸಲ್ಲಿಸುತ್ತಾನೆ ಎಂಬುದರ ಬಗ್ಗೆ ಹುದ್ದೆಯ ಹೆಸರನ್ನು ನಮೂದಿಸುವುದು.

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಪಡೆದು, ಅರ್ಜಿಗಳನ್ನು ಸಂಬಂಧಿತ ನೇಮಕಾತಿ ಪ್ರಾಧಿಕಾರದ ಮೂಲಕ ಕಳುಹಿಸಬೇಕು.

**10. ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲಾತಿಗಳು:**

ಅಭ್ಯರ್ಥಿಗಳು ಈ ಕೆಳಕಂಡ ದಾಖಲಾತಿಗಳ ಸ್ವಯಂ ದೃಢೀಕರಿಸಿದ ಒಂದು ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು. ಸ್ವಯಂ ದೃಢೀಕರಿಸದ ಲಗತ್ತುಗಳನ್ನು ಪರಿಗಣಿಸಲಾಗುವುದಿಲ್ಲ. (ಯಾವುದೇ ಮೂಲ ಪ್ರಮಾಣ ಪತ್ರಗಳನ್ನು ಲಗತ್ತಿಸಕೂಡದು)

1. ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರದ ಮೇಲೆ ಸಹಿ ಮಾಡಿ ಅಂಟಿಸುವುದು.

2. ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್.ಎಸ್.ಎಲ್.ಸಿ. ಅಂಕಪಟ್ಟಿ/ಸಂಚಿತ ದಾಖಲೆಯ ಉದ್ಧೃತಭಾಗ (Extract of Cumulative Record) ವರ್ಗಾವಣೆ ಪ್ರಮಾಣಪತ್ರ/ ಇನ್ನಾವುದೇ ಅಧಿಕೃತ ದಾಖಲಾತಿಗಳು.

3. ವಿದ್ಯಾರ್ಹತೆಯ ಬಗ್ಗೆ ಅಂಕಪಟ್ಟಿಗಳು.
4. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ "ಡಿ" ಯಲ್ಲಿ ಪ್ರವರ್ಗ–1 ರ ಅಭ್ಯರ್ಥಿಗಳು ನಮೂನೆ "ಇ" ಯಲ್ಲಿ ಮತ್ತು 2ಎ, 2ಬಿ, ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ– "ಎಫ್" ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ/ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದು ಸಲ್ಲಿಸಬೇಕು.

5. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ/96/ಸೇನನಿ/2005, ದಿನಾಂಕ:10–08–2005 ರ ಪ್ರಕಾರ ನಿಗದಿತ ನಮೂನೆ–2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿರಬೇಕು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ , ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

6. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ–2 ರ ಜೊತೆ ನಮೂನೆ–1 ರಲ್ಲಿ ದೃಢೀಕರಣ ಪತ್ರ ಹೊಂದಿರಬೇಕು.

7. ಅಂಗವಿಕಲ (ಅಂಅ.) ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತವನ್ನು ದಿನಾಂಕ: 19-11-2005 ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖೆ:ಸಿಆಸುಇ/115/ಸೇನನಿ/2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರ.

8. ಮಾಜಿ ಸೈನಿಕ (ಮಾ.ಸೈ) ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ/ ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ.

9. ಹೈದ್ರಾಬಾದ್ ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳಿಗಾಗಿ ಅರ್ಜಿ ಸಲ್ಲಿಸುವವರು ಸರಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013 ಬೆಂಗಳೂರು ದಿನಾಂಕ: 29-01-2014 ರಲ್ಲಿ ನಿಗಧಿಪಡಿಸಲಾದ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013 ರ ನಿಯಮ 3(3) ರಲ್ಲಿ ಗೊತ್ತುಪಡಿಸಿರುವಂತೆ ಅನುಭಂಧ-ಎ ಯಲ್ಲಿರುವಂತೆ " ಅರ್ಹತಾ ಪ್ರಮಾಣ ಪತ್ರ" ವನ್ನು ಸಂಬಂಧಪಟ್ಟ ಸಹಾಯಕ ಆಯುಕ್ತರವರಿಂದ ಹಾಗೂ ಸೇವಾನಿರತ ಆಭ್ಯರ್ಥಿಗಳು ಸ್ವಗ್ರಾಮ ಪ್ರಮಾಣವನ್ನು ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರದಿಂದ ಅಧಿಸೂಚನೆಯ ಕೊನೆಯ ದಿನಾಂಕದ ಒಳಗಾಗಿ ಪಡೆದಿರಬೇಕು.

10. ಸರಕಾರದ ಸುತ್ತೋಲೆ ಸಂ. ಸಿಆಸುಇ/78/ಹೈ.ಕಕೋ/2014, ಬೆಂಗಳೂರು ದಿ: 22-05-2015 ರನ್ವಯ ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವೃಂದದ ಮೀಸಲಾತಿ ಕೋರುವ ಅಭ್ಯರ್ಥಿಗಳು ಮಿಕ್ಕುಳಿದ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೂ ತಮ್ಮ ಅಭ್ಯರ್ಥಿತತ್ವವನ್ನು ಪರಿಗಣಿಸಲು ಆಯ್ಕೆ ಮಾಡುವ ಅವಕಾಶವನ್ನು ಹೊಂದಿರುತ್ತಾರೆ. ಅರ್ಜಿಯಲ್ಲಿ ವಿವರವಾಗಿ ತೋರಿಸಿರುವಂತೆ ಆಯ್ಕೆಗಳನ್ನು ಮಾಡಲು ಅಭ್ಯರ್ಥಿಗಳಿಗೆ ಸೂಚಿಸಲಾಗಿದೆ. ಆದ್ದರಿಂದ ಅಭ್ಯರ್ಥಿಗಳು ಸ್ಥಳೀಯ ವೃಂದ ಹಾಗೂ ಮಿಕ್ಕುಳಿದ ವೃಂದದಲ್ಲಿ ಬೇರೆ ಬೇರೆಯಾಗಿ ಅರ್ಜಿ ಸಲ್ಲಿಸುವ ಪ್ರಮೇಯ ಬರುವುದಿಲ್ಲ. ಕೇವಲ ಒಂದು ಅರ್ಜಿಯನ್ನು ಮಾತ್ರ ಸಲ್ಲಿಸಬಹುದು.

11. ವಿಧವೆಯರು, ಜೀತ ಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂಧ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸುವುದು.

12. ಸ್ವಯಂ ವಿಳಾಸವಿರುವ ರೂ.5/- ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಲಗತ್ತಿಸುವುದು. ಇರದಿದ್ದರ ಅಂತಹ ಅರ್ಜಿಗಳನ್ನು ಪರಿಗಣಿಸುವುದಿಲ್ಲ.

13. **ವಿಶೇಷ ಸೂಚನೆಃ**

- ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಇಲ್ಲವೇ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಕಡ್ಡಾಯವಾಗಿ ಸ್ವಯಂ ದೃಢೀಕರಿಸಿರಬೇಕು. ಲೋಪದೋಶವಿದ್ದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವುದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವುದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವುದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವುದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವುದು ಅಥವಾ ಅನುಸರಿಸಲು ಪ್ರಯತ್ನಿಸಿರುವುದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡು ಬಂದಲ್ಲಿ ಅವರ ಅಭ್ಯರ್ಥಿತ್ವವನ್ನು ರದ್ದು ಪಡಿಸಲಾಗುವುದು ಅಲ್ಲದೇ ಅಭ್ಯರ್ಥಿಯನ್ನು ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು.
- ಯಾವುದೇ ಅಭ್ಯರ್ಥಿಯು ಸರ್ಕಾರಿ/ ಸರ್ಕಾರೇತರ ಅಧಿಕಾರಿಗಳಿಂದ ತನ್ನ ಅಭ್ಯರ್ಥಿತ್ವದ ಬಗ್ಗೆ ಪ್ರಭಾವ ಬೀರಿದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.
- ಒಬ್ಬ ಅಭ್ಯರ್ಥಿಯು ಒಂದು ಹುದ್ದೆಗೆ ಒಂದೇ ಅರ್ಜಿಯನ್ನು ಸಲ್ಲಿಸತಕ್ಕದ್ದು.
- ಯಾವುದೇ ಅಭ್ಯರ್ಥಿಯು ಸಂದರ್ಶನದ ಬಗ್ಗೆ ಮಾಹಿತಿ ಬರದಿದ್ದರೆ, ಅವರು ಸಂದರ್ಶನಕ್ಕೆ ಅರ್ಹರಲ್ಲ ಎಂದು ತಿಳಿಯುವುದು ಮತ್ತು ಈ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ.
- ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ದಿನಾಂಕವು ಸಾರ್ವಜನಿಕ ರಜೆಯಾಗಿದ್ದರೆ ಮುಂದಿನ ಕಛೇರಿ ಕೆಲಸದ ದಿನ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಎಂದು ತಿಳಿಯುವುದು.

Manjula 22/5/2019

( ಮಂಜುಳಾ )
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ರಾಯಚೂರು

<u>ಅಧಿಸೂಚನೆಯ ನಕಲನ್ನು ಈ ಕೆಳಕಂಡವರ ಅವಗಾಹನೆಗಾಗಿ ಸಲ್ಲಿಸಲಾಗಿದೆ:</u>

ಮಹಾವಿಲೇಖನಾಧಿಕಾರಿಗಳು,
ಗೌರವಾನ್ವಿತ ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು– 560 0001.

<u>ಅಧಿಸೂಚನೆಯ ನಕಲನ್ನು ಈ ಕೆಳಕಂಡವರಿಗೆ ರವಾನಿಸಲಾಗಿದೆ:</u>

1. ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ, ಬಾಗಲಕೋಟೆ, ಬೆಳಗಾವಿ, ಮೈಸೂರು, ಬೀದರ್, ಬಿಜಾಪೂರ, ಚಾಮರಾಜನಗರ, ಚಿಕ್ಕಬಳ್ಳಾಪೂರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಗುಲ್ಬರ್ಗ, ಹಾಸನ, ಹಾವೇರಿ ಕೊಡುಗು, ಕೋಲಾರ, ಕೊಪ್ಪಳ, ಮಂಗಳೂರು, ಮಂಡ್ಯ ರಾಮನಗರ, ತುಮಕೂರು, ಉಡುಪಿ ಮತ್ತು ಕಾರವಾರ <u>ಇವರಿಗೆ, ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮಕೈಗೊಳ್ಳುವಂತೆ ಕೋರಲಾಗಿದೆ.</u>

2.ವಿಲೇಖನಾಧಿಕಾರಿಗಳು, ನಗರ ಸಿವಿಲ್ ನ್ಯಾಯಾಲಯ, ಬೆಂಗಳೂರು ಇವರಿಗೆ ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮಕೈಗೊಳ್ಳುವಂತೆ ಕೋರಿದೆ.
3. ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ,ಲಿಂಗಸುಗೂರು
4. ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಸಿಂಧನೂರು
5. ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ದೇವದುರ್ಗ
6. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ., ಮಾನವಿ
7. ಪ್ರಧಾನ/ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ., ಸಿಂಧನೂರು,
8. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ., ದೇವದುರ್ಗ
9. ಪ್ರಧಾನ/ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ., ಲಿಂಗಸುಗೂರು
ಸದರಿ ಮೇಲ್ಕಾಣಿಸಿದ ಕ್ರ.ಸಂ.3 ರಿಂದ 8ರವರೆಗಿನ ಸಂಬಂಧಪಟ್ಟ ನ್ಯಾಯಾಧೀಶರುಗಳಿಗೆ ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯಕ್ರಮ ಕೈಗೊಳ್ಳುವಂತೆ ಕೋರಿದೆ.
10. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಶಾಖಾ ಮುದ್ರಣಾಲಯ, ಕಲಬುರಗಿ – ಇವರಿಗೆ ಕರ್ನಾಟಕ ರಾಜ್ಯ ವಾರ್ತಾ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ
11. ನಿರ್ದೇಶಕರು, ವಾರ್ತಾ, ಪ್ರಚಾರ ಮತ್ತು ಪ್ರವಾಸೋದ್ಯಮ ಇಲಾಖೆ,ರಾಯಚೂರು ಇವರಿಗೆ ಸಾದಿಲ್ವಾರು ವೆಚ್ಚ ಕೈಪಿಡಿ ನಿಯಮ 55 (ಬಿ)(ಡಿ) ಪ್ರಕಾರ 2 ಹೆಚ್ಚು ಪ್ರಸಾರ ಉಳ್ಳ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಚಾರಪಡಿಸುವ ಕುರಿತು

"ನ್ಯಾಯಾಲಯದ ಆದೇಶದ ಮೇರೆಗೆ"

ಮುಖ್ಯ ಆಡಳಿತಾಧಿಕಾರಿಗಳು,
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ರಾಯಚೂರು

# ಅರ್ಜಿ ನಮೂನೆ

ಇತ್ತೀಚಿನ ಪಾಸಪೋರ್ಟ
ಅಳತೆಯ ಭಾವಚಿತ್ರದ ಮೇಲೆ
ಸಹಿ ಮಾಡಿ ಅಂಟಿಸುವುದು

ರವರಿಗೆ,
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ರಾಯಚೂರು

ತಮ್ಮ ಕಛೇರಿಯ ದಿನಾಂಕಃ ರ ಅಧಿಸೂಚನೆಯ ಮೇರೆಗೆ ನಾನು ____________________
ಹುದ್ದೆಗೆ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ ಮತ್ತು ಈ ಕೆಳಕಂಡ ಮಾಹಿತಿಯನ್ನು ಒದಗಿಸುತ್ತಿದ್ದೇನೆ.

| | | | | |
|---|---|---|---|---|
| 1 | ಅಭ್ಯರ್ಥಿಯ ಹೆಸರು (ದಪ್ಪ ಅಕ್ಷರಗಳಲ್ಲಿ) | | | |
| 2 | ತಂದೆ/ ಗಂಡನ ಹೆಸರು | | | |
| 3 | ತಾಯಿಯ ಹೆಸರು | | | |
| 4 | ಜನ್ಮ ದಿನಾಂಕ | | | |
| 5 | ವಯಸ್ಸು (ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ ದಂದು ಅಭ್ಯರ್ಥಿಯ ವಯಸ್ಸು) | ವರ್ಷಗಳು | ತಿಂಗಳುಗಳು | ದಿನಗಳು |
| 6 | ಲಿಂಗ | ಪುರುಷ | | ಮಹಿಳೆ |
| 7 | ರಾಷ್ಟ್ರೀಯತೆ | | | |
| 8 | ಧರ್ಮ ಮತ್ತು ಜಾತಿ | | | |
| 9 | ವೈವಾಹಿಕ ಸ್ಥಿತಿ | ವಿವಾಹಿತ/ಅವಿವಾಹಿತ | | ವಿವಾಹಿತೆ/ಅವಿವಾಹಿತೆ |
| 10 | ವಿವಾಹಿತರಾದಲ್ಲಿ ಒಬ್ಬರಿಗಿಂತ ಹೆಚ್ಚು ಜೀವಂತ ಗಂಡ ಅಥವಾ ಹೆಂಡತಿ ಇದ್ದಾರೆಯೇ? | | | |
| 11 | ನೀವು ಯಾವುದಾದರೂ ಕ್ರಿಮಿನಲ್ ಮೊಕ್ಕದಮೆಯಲ್ಲಿ ಭಾಗಿಯಾಗಿದ್ದೀರ | ಹೌದು | | ಇಲ್ಲ |
| 12 | ನೀವು ಸರ್ಕಾರಿ ಸೇವೆಯಿಂದ ಅಥವಾ ಇನ್ನಾವುದಾದರೂ ಸೇವೆಯಿಂದ ವಜಾ ಅಗಿದ್ದೀರ ಅಥವಾ ತೆಗೆದುಹಾಕಲ್ಪಟ್ಟಿದ್ದೀರ? | ಹೌದು | | ಇಲ್ಲ |

| | | | | | |
|---|---|---|---|---|---|
| 13 | ಕೋರುವ ಮೀಸಲಾತಿಗಳು: (ಕೋರುವ ಮೀಸಲಾತಿಯನ್ನು ಚಿಹ್ನೆ ಹಾಕುವುದರ ಮೂಲಕ ಗುರುತಿಸಿ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸಬೇಕು) | ಸಾಮಾನ್ಯ | ಪ್ರ.ಜಾತಿ | ಪ.ಪಂಗಡ | ಪ್ರವರ್ಗ_1 |
| | | | | | |
| | | 2ಎ | 2ಬಿ | 3ಎ | 3ಬಿ |
| | | | | | |
| 14 | ನೀವು ಈ ಯಾವುದಾದರೂ ಮೀಸಲಾತಿ ಅಡಿಯಲ್ಲಿ ಬರುತ್ತೀರ? (ಕೋರುವ ಮೀಸಲಾತಿಯನ್ನು ಚಿಹ್ನೆ ಹಾಕುವುದರ ಮೂಲಕ ಗುರುತಿಸಿ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸಬೇಕು) | ಮಹಿಳೆ | ಗ್ರಾಮೀಣ | ಮಾ.ಸೈ | ಅಂ.ಅ |
| | | | | | |
| 15 | ನೀವು ಹೈದರಾಬಾದ್ _ ಕರ್ನಾಟಕ ಸ್ಥಳೀಯ ವೃಂದದ ಹುದ್ದೆಗೆ ಮೀಸಲಾತಿ ಕೋರಿರುವಿರಾ? (ಹೌದಾದಲ್ಲಿ ಅಗತ್ಯ ಪ್ರಮಾಣ ಪತ್ರದ ಸ್ವಯಂ ದೃಢಿಕೃತ ನಕಲನ್ನು ಲಗತ್ತಿಬೇಕು) | ಹೌದು | | ಇಲ್ಲ | |
| 16 | ವಿದ್ಯಾರ್ಹತೆ: ( ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು) (ಸೂಚನೆ: ಅನ್ವಯಿಸುವ ವಿದ್ಯಾರ್ಹತೆಯ ಅಂಕಣಗಳನ್ನು ಮಾತ್ರ ಭರ್ತಿ ಮಾಡುವುದು) | ತೇರ್ಗಡೆಯಾದ ತಿಂಗಳು ಮತ್ತು ವರ್ಷ | ಗರಿಷ್ಟ ಅಂಕಗಳು | ಗಳಿಸಿದ ಅಂಕಗಳು | |
| | ಎಸ್‌ಎಸ್‌ಎಲ್‌ಸಿ | | | | |
| | ಕನ್ನಡ ಬೆರಳಚ್ಚು (ಕಿರಿಯ ಶ್ರೇಣಿ) | | | | |
| | ಆಂಗ್ಲ ಬೆರಳಚ್ಚು (ಕಿರಿಯ ಶ್ರೇಣಿ) | | | | |
| | ಕನ್ನಡ ಬೆರಳಚ್ಚು (ಹಿರಿಯ ಶ್ರೇಣಿ) | | | | |
| | ಆಂಗ್ಲ ಬೆರಳಚ್ಚು (ಹಿರಿಯ ಶ್ರೇಣಿ) | | | | |
| | ಕನ್ನಡ ಶೀಘ್ರಲಿಪಿ (ಹಿರಿಯ ಶ್ರೇಣಿ) | | | | |
| | ಆಂಗ್ಲ ಶೀಘ್ರಲಿಪಿ (ಹಿರಿಯ ಶ್ರೇಣಿ) | | | | |
| | ಇತರ ಯಾವುದೆ ವಿದ್ಯಾರ್ಹತೆ: | | | | |

| | | ಹೌದು | ಇಲ್ಲ |
|---|---|---|---|
| 17 | ನೀವು ಪ್ರಸ್ತುತ ಸರ್ಕಾರಿ ಸೇವೆಯಲ್ಲಿರುವಿರ? (ಸರ್ಕಾರಿ ಸೇವೆಯಲ್ಲಿದ್ದ ನೇಮಕಾತಿ ಪ್ರಾಧಿಕಾರದಿಂದ ಪಡೆದ ನಿರಾಕ್ಷೇಪಣ ಪತ್ರದ ನಕಲನ್ನು ಲಗತ್ತಿಸಬೇಕು) | | |
| 18 | ಅಭ್ಯರ್ಥಿಯ ಖಾಯಂ ವಿಳಾಸ ಮತ್ತು ದೂರವಾಣಿ ಸಂಖ್ಯೆ: | | |
| 19 | ಅಭ್ಯರ್ಥಿಯ ಅಂಚೆ ವಿಳಾಸ ಮತ್ತು ದೂರವಾಣಿ ಸಂಖ್ಯೆ | | |
| 20 | ನಿಮ್ಮ ಸ್ವವಿಳಾಸವಿರುವ ರೂ.5/- ರ ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಲಗತ್ತಿಸಿದ್ದೀರ | | |

ಈ ಮೇಲ್ಕಂಡ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ ಹಾಗೂ ಒಂದು ವೇಳೆ ಮೇಲ್ಕಂಡ ಮಾಹಿತಿಗಳು ತಪ್ಪು ಎಂದು ಕಂಡುಬಂದಲ್ಲಿ ನನ್ನ ಅಭ್ಯರ್ಥಿತ್ವವನ್ನು ರದ್ದುಪಡಿಸಬಹುದೆಂದು ಘೋಷಿಸುತ್ತೇನೆ.

ಸ್ಥಳ :

ದಿನಾಂಕ:

ಅಭ್ಯರ್ಥಿಯ ಸಹಿ